ನ-72-(2)

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳಾದ ಶ್ರೀ ಕೆ.ಟಿ. ಶ್ರೀಕಂಠೇಗೌಡ, ಮರಿತಿಬ್ಬೇಗೌಡ ಮತ್ತು ಪುಟ್ಟಣ್ಣ ರವರು ನಿಯಮ 72 ರಡಿ ನೀಡಿರುವ ಸೂಚನಾ ಪತ್ರಕ್ಕೆ ಸರ್ಕಾರದ ಉತ್ತರ**

**ವಿಷಯ:-** "ಆರ್ಥಿಕ ಇಲಾಖೆ ಇವರ ಸುತ್ತೋಲೆ ಸಂಖ್ಯೆ; ಆಇ/157/ವೆಚ್ಚ-8/2020, ದಿನಾಂಕ:10.06.2020 ರಲ್ಲಿ ಕೋವಿಡ್-19 ಹಿನ್ನೆಲೆಯಲ್ಲಿ ಅನುಮೋದನೆ ನೀಡಲು ಸಾಧ್ಯವಿಲ್ಲವೆಂದು ಸುತ್ತೋಲೆ ಹೊರಡಿಸಿರುವುದರಿಂದ ಅನುದಾನಿತ ಪ್ರಾಥಮಿಕ, ಪ್ರೌಢ, ಪದವಿಪೂರ್ವ ಮತ್ತು ಪದವಿ ಕಾಲೇಜುಗಳಲ್ಲಿ ನಿವೃತ್ತಿ, ರಾಜೀನಾಮೆ ಇನ್ನಿತರೆ ಕಾರಣಗಳಿಂದ ಖಾಲಿಯಾಗಿರುವ ಬೋಧಕರ ಹುದ್ದೆಗಳ ಭರ್ತಿಯ ಸಂಬಂಧದ ಪ್ರಸ್ತಾವನೆಗಳು ಹಾಗೂ 1986 ರಿಂದ 1995ನೇ ಸಾಲಿನವರೆಗೆ ಅನುದಾನ ರಹಿತ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೊಳಪಡಿಸುವ ಸಂಬಂಧ ಸಲ್ಲಿಸಲಾಗಿರುವ ಪ್ರಸ್ತಾವನೆಗಳು ಸರ್ಕಾರದ ಹಂತದಲ್ಲಿ ಬಾಕಿ ಇರುವುದರಿಂದ ಶೈಕ್ಷಣಿಕ ಪ್ರಗತಿ ಕುಂಠಿತವಾಗಿದ್ದು, ಈ ಗಂಭೀರ ಸಮಸ್ಯೆ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯ ಬಯುಸುತ್ತೇನೆ."

**ಉತ್ತರ:-** ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ರಾಜ್ಯದಲ್ಲಿ ಆರ್ಥಿಕ ಸಂಕಷ್ಟ ಸೃಷ್ಟಿಯಾಗಿರುವ ಹಿನ್ನೆಲೆಯಲ್ಲಿ ಸುತ್ತೋಲೆ ಸಂಖ್ಯೆ:ಆಇ 157 ವೆಚ್ಚ-8/2020, ದಿನಾಂಕ:10.06.2020ರನ್ವಯ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ನಿವೃತ್ತಿ, ನಿಧನ ರಾಜೀನಾಮೆ ಇತರೆ ಯಾವುದೇ ಕಾರಣಗಳಿಂದ ಖಾಲಿಯಾಗುವ ಹುದ್ದೆಗಳನ್ನು 2020-21ನೇ ಸಾಲಿನಲ್ಲಿ ಭರ್ತಿ ಮಾಡುವುದನ್ನು ತಡೆಹಿಡಿಯಲಾಗಿದೆ ಹಾಗೂ ಸುತ್ತೋಲೆ ಸಂಖ್ಯೆ:ಆಇ 03 ಬಿಇಎಂ 2020, ದಿನಾಂಕ:06.07.2020ರನ್ವಯ 2020-21ನೇ ಸಾಲಿನ ಆರ್ಥಿಕ ವರ್ಷದಲ್ಲಿ ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳು ಮತ್ತು ಬ್ಯಾಕ್ ಲಾಗ್ ಹುದ್ದೆಗಳೂ ಸೇರಿದಂತೆ ರಾಜ್ಯ ಸಿವಿಲ್ ಸೇವೆಯಲ್ಲಿನ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಸಹ ಮುಂದಿನ ಆದೇಶದವರೆಗೆ ತಡೆಹಿಡಿಯಲಾಗಿದೆ.

ಆದಾಗ್ಯೂ, ಶೈಕ್ಷಣಿಕ ಹಿತದೃಷ್ಟಿ ಹಾಗೂ ಬೋಧಕರ ವಯೋಮಾನ ಮೀರುವುದನ್ನು ಪರಿಗಣಿಸಿ, ಖಾಸಗಿ ಅನುದಾನಿತ ಪ್ರೌಢಶಾಲೆ, ಪದವಿ ಪೂರ್ವ ಮತ್ತು ಪದವಿ ಕಾಲೇಜುಗಳಲ್ಲಿ ದಿನಾಂಕ:31.12.2015ರ ಅಂತ್ಯಕ್ಕೆ ನಿವೃತ್ತಿ, ಮರಣ, ರಾಜೀನಾಮೆ ಇತ್ಯಾದಿ ಕಾರಣಗಳಿಂದ ಖಾಲಿ ಉಂಟಾಗಿರುವ ಹುದ್ದೆಗಳ ಪೈಕಿ ಈಗಾಗಲೇ ಸರ್ಕಾರದಿಂದ ಅನುಮೋದನೆಗೊಂಡು ನೇಮಕಾತಿ ಪ್ರಕ್ರಿಯೆಯು ಇಲಾಖೆಯಲ್ಲಿ ಅಂತಿಮ ಹಂತದಲ್ಲಿ ಬಾಕಿ ಇರುವ ಕ್ರಮವಾಗಿ 257, 173 ಮತ್ತು 340 ಬೋಧಕ ಹುದ್ದೆಗಳಿಗೆ ನೇಮಕಾತಿ ಆದೇಶವನ್ನು 2021-22ನೇ ಶೈಕ್ಷಣಿಕ ವರ್ಷ ಪ್ರಾರಂಭಗೊಂಡ ನಂತರ ನೀಡಲು ಸಹಮತಿಸಲಾಗಿರುತ್ತದೆ.

ಸಂಖ್ಯೆ:ಆಇ 54 ವೆಚ್ಚ-8/2020

ಬಿ.ಎಸ್. ಯಡಿಯೂರಪ್ಪ

(ಬಿ.ಎಸ್.ಯಡಿಯೂರಪ್ಪ)

ಮುಖ್ಯ ಮಂತ್ರಿ